## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ 2014-15ನೇ ಸಾಲಿನ ಪ್ರಥಮ ಕಂತಾಗಿ ರೂ.25.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಯೋಇ 64 ಎಸ್‌ಎಸ್‌ಎಂ 2014, ದಿನಾಂಕ:01.04.2014.

2) ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರ ಪತ್ರ ಸಂಖ್ಯೆ: ಕಾ/ಕ.ಅ.ಪ್ರಾ./ಮಂ/2013-14/11 ದಿ: 04.04.2014.

ಪ್ರಸ್ತಾವನೆ:

ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ 2014-15ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ.100.00 ಲಕ್ಷಗಳನ್ನು ಈ ಕೆಳಕಂಡಂತೆ ಒದಗಿಸಲಾಗಿದೆ.

| ಕ್ರ.ಸಂ | ಲೆಕ್ಕಶೀರ್ಷಿಕೆ | ಉಪಶೀರ್ಷಿಕೆ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2217-80-001-1-06 | 002 (ಅಧಿಕಾರಿಗಳ ವೇತನ) | 14.49 |
| 2 | | 003 (ಸಿಬ್ಬಂದಿಗಳ ವೇತನ) | 0.01 |
| 3 | | 011 (ತುಟ್ಟಿಭತ್ಯೆ) | 3.92 |
| 4 | | 014 (ಇತರ ಭತ್ಯೆ) | 1.11 |
| 5 | | 020 (ವೈದ್ಯಕೀಯ ಭತ್ಯೆ) | 0.01 |
| 6 | | 021 (ವೈದ್ಯಕೀಯ ವೆಚ್ಚ ಮರುಪಾವತಿ) | 2.00 |
| 7 | | 059 (ಇತರ ವೆಚ್ಚಗಳು) | 78.46 |
| | | ಒಟ್ಟು | 100.00 |

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಯೋಜನೆಯನ್ನು 2014-15 ನೇ ಸಾಲಿಗೆ ಮುಂದುವರಿಸಲಾಗಿದೆ. ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕಾರ್ಯದರ್ಶಿ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಇವರು 2014-15ನೇ ಸಾಲಿನ ಪ್ರಥಮ ಕಂತಾಗಿ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಮಂಗಳೂರು ಇದಕ್ಕೆ 2014-15ನೇ ಸಾಲಿನ ಪ್ರಥಮ ಕಂತಿನ ಅನುದಾನವೆಂದು ರೂ.25.00 ಲಕ್ಷಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಿದೆ. ಅಂತೆಯೇ ಈ ಆದೇಶ

## ಸರ್ಕಾರದ ಆದೇಶ ಸಂಖ್ಯೆ: ಯೋಇ 16 ಪಿಟಿಪಿ 2014, ಬೆಂಗಳೂರು, ದಿನಾಂಕ:06.05.2014

ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಮಂಗಳೂರು ಇದಕ್ಕೆ 2014-15ನೇ ಸಾಲಿನ ಪ್ರಥಮ ಕಂತಿನ ಅನುದಾನವೆಂದು ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆ ಮಾಡಿದೆ.

| ಕ್ರ.ಸಂ | ಲೆಕ್ಕಶೀರ್ಷಿಕೆ | ಉಪಶೀರ್ಷಿಕೆ | ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2217-80-001-1-06 | 002 (ಅಧಿಕಾರಿಗಳ ವೇತನ) | 4.50 |
| 2 | | 003 (ಸಿಬ್ಬಂದಿಗಳ ವೇತನ) | 0.0025 |
| 3 | | 011 (ತುಟ್ಟಿಭತ್ಯೆ) | 1.00 |
| 4 | | 014 (ಇತರ ಭತ್ಯೆ) | 0.30 |
| 5 | | 020 (ವೈದ್ಯಕೀಯ ಭತ್ಯೆ) | 0.0025 |
| 6 | | 021 (ವೈದ್ಯಕೀಯ ವೆಚ್ಚ ಮರುಪಾವತಿ) | 0.50 |
| 7 | | 059 (ಇತರ ವೆಚ್ಚಗಳು) | 18.695 |
| | | **ಒಟ್ಟು** | **25.00** |

.........................2

ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆಯಾದ ಮೊತ್ತವನ್ನು ಕಾರ್ಯಕ್ರಮಕ್ಕನುಗುಣವಾಗಿ ಖರ್ಚು ಮಾಡತಕ್ಕದ್ದು. ನಿಯಮಾನುಸಾರ ಹಣ ಬಳಕೆ ದೃಢೀಕರಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶದ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2014, ದಿನಾಂಕ: 04.04.2014ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ರಫಿ ಅಹಮ್ಮದ್.ಎಂ.ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ(ಎಸ್-5) (ಪ್ರಭಾರ),
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
3. ಕಾರ್ಯದರ್ಶಿ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ, ಮಂಗಳೂರು,
4. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಅಂಬೇಡ್ಕರ್ ವೀಧಿ, ಬೆಂಗಳೂರು.
5. ಉಪ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಲ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಜಿಲ್ಲಾ ಖಜಾನಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-5&6), ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
2. ನಿರ್ದೇಶಕರು, ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಸಹಾಯಕರು.